463(457) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಮುದ್ದೇಬಿಹಾಳದಲ್ಲಿ ಸರ್ಕಾರಿ ಪದವಿ ಕಾಲೇಜು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ಗ್ರಾಮೀಣ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಮುದ್ದೇಬಿಹಾಳದಲ್ಲಿ ಪದವಿ ಕಾಲೇಜನ್ನು ಪ್ರಾರಂಭಿಸಲು ಸರ್ಕಾರಕ್ಕಿರುವ ತೊಡಕುಗಳೇನು,

ಇ) ಮುದ್ದೇಬಿಹಾಳ ತಾಲ್ಲೂಕು ಕೇಂದ್ರಕ್ಕೆ ಸರ್ಕಾರವು ಯಾವಾಗ ಪದವಿ ಕಾಲೇಜನ್ನು ಮಂಜೂರು ಮಾಡಲಾಗುವುದು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಮುದ್ದೇಬಿಹಾಳದಲ್ಲಿ 2007–08ನೇ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ

ಇ) ಕಂಡಿಕೆ (ಆ)ನಲ್ಲಿ ಉತ್ತರಿಸಲಾಗಿದೆ

464(42) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದ ಪ್ರೌಢಶಾಲೆಗಳ ವಿದ್ಯಾರ್ಥಿನಿಯರಿಗೆ ಇಲ್ಲಿಯವರೆಗೆ ವಿತರಣೆ ಮಾಡಿದ ಬೈಸಿಕಲ್‌ಗಳ ಸಂಖ್ಯೆ ಎಷ್ಟು,

ಆ) ರಾಜ್ಯದ ಒಟ್ಟು ಪ್ರೌಢಶಾಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಬೈಸಿಕಲ್‌ಗಳನ್ನು ವಿತರಣೆ ಮಾಡಲಾಗಿದೆಯೇ,

ಇ) ಬೈಸಿಕಲ್‌ಗಳಿಗೆ ಒಟ್ಟು ಖರ್ಚಾದ ಮೊತ್ತವೆಷ್ಟು?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 2006–07ನೇ ಸಾಲಿನಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಿಗೆ ಸೇರಿದ 1,75,023 ವಿದ್ಯಾರ್ಥಿನಿಯರಿಗೆ ಬೈಸಿಕಲ್‌ಗಳನ್ನು ವಿತರಿಸಲಾಗಿದೆ

ಆ) ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಿಗೆ ಸೇರಿದ ಹೆಣ್ಣು ಮಕ್ಕಳಿಗೆ ಮಾತ್ರ ಬೈಸಿಕಲ್‌ಗಳನ್ನು ವಿತರಿಸಲಾಗಿದೆ

ಇ) ಒಟ್ಟು ರೂ 35,52,96,690–00 (ಮೂವತ್ತೈದು ಕೋಟಿ ಐವತ್ತೆರಡು ಲಕ್ಷ ತೊಂಬತ್ತಾರು ಸಾವಿರದ ಆರು ನೂರ ತೊಂಬತ್ತು ಮಾತ್ರ)

466(44) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) 2006–07ನೇ ಸಾಲಿನಲ್ಲಿ ಮಂಜೂರಾದ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು, ಜಿಲ್ಲಾವಾರು ಮತ್ತು ತಾಲ್ಲೂಕುವಾರು ಪಟ್ಟಿಯನ್ನು ನೀಡುವುದು,

ಆ) ಡಾ ನಂಜುಂಡಪ್ಪನವರ ವರದಿ ಪ್ರಕಾರ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ಮೊದಲನೆಯ ಆದ್ಯತೆಯನ್ನು ಕೊಟ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆಯೇ, (ತಾಲ್ಲೂಕುವಾರು ವಿವರಗಳನ್ನು ನೀಡುವುದು)

ಇ) 2006–07ನೇ ಸಾಲಿನಲ್ಲಿ ಹೊಸದಾಗಿ ಮಂಜೂರು ಮಾಡಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಉಪನ್ಯಾಸಕರ ಹುದ್ದೆಗಳನ್ನು ಹಾಗೂ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆಯೇ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 2006–07ನೇ ಸಾಲಿನಲ್ಲಿ 485 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ (ಪಟ್ಟಿಯನ್ನು ಲಗತ್ತಿಸಿದೆ)